## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಗೆ 2019-20ನೇ ಸಾಲಿಗೆ ಮಂಜೂರಾದ ಯೋಜನಾ ಆಯವ್ಯಯದಿಂದ ಮೊದಲನೇ ತ್ರೈಮಾಸಿಕಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ: ಕಾಇ 7 ಕಾಬಾಸೇ 2019, ದಿನಾಂಕ: 26/04/2019
2. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ: 03/04/2019
3. ಆರ್ಥಿಕ ಇಲಾಖೆಯ ಆಯವ್ಯಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 380 ವೆಚ್ಚ-9/2019, ದಿನಾಂಕ: 04/04/2019
4. ಸರ್ಕಾರದ ಆದೇಶ ಸಂಖ್ಯೆ: ಆಇ 404 ವೆಚ್ಚ-9/2019, ದಿನಾಂಕ: 023/04/2019
5. ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ ಇವರ ಪತ್ರ ಸಂಖ್ಯೆ: ಎಸಿಟಿ-2/ಬಿಯುಡಿ/ಸಿಆರ್-01/2019-20, ದಿನಾಂಕ: 27/04/2019

***

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ 2019-20ನೇ ಸಾಲಿನಲ್ಲಿ ವರ್ಕಿಂಗ್ ಕಂಡೀಷನ್ಸ್ ಅಂಡ್ ಸೇಫ್ಟಿ-ಇನ್ಸ್‌ಪೆಕ್ಟರ್ ಆಫ್ ಫ್ಯಾಕ್ಟರೀಸ್ ಯೋಜನೆಯನ್ನು (ಯಂತ್ರೋಪಕರಣಗಳು ಮತ್ತು ಸಾಧನ ಸಾಮಗ್ರಿಗಳನ್ನೊಳಗೊಂಡಂತೆ) ಮುಂದುವರೆಸಲಾಗಿರುತ್ತದೆ.

ಮೇಲೆ ಓದಲಾದ (2)ರ ಆರ್ಥಿಕ ಇಲಾಖೆಯ ಸರ್ಕಾರಿ ಆದೇಶದಲ್ಲಿ 2019-20ನೇ ಸಾಲಿನಲ್ಲಿ ಮೊದಲನೇ ಕಂತಿನ ಹಣ ಬಿಡುಗಡೆಗೆ ಸಂಬಂಧಿಸಿದಂತೆ ಅನುಬಂಧ-2 ರಲ್ಲಿ ಪಟ್ಟಿ ಮಾಡಲಾದ ಬಾಬ್ತುಗಳಿಗೆ ಆರ್ಥಿಕ ಇಲಾಖೆಯ ಸಹಮತಿ ಇದೆ ಎಂದು ಭಾವಿಸಿ ಆಡಳಿತ ಇಲಾಖೆಗಳು ಹಣ ಬಿಡುಗಡೆ ಮಾಡಬಹುದೆಂದು ಆದೇಶಿಸಿರುತ್ತದೆ.

2019-20ನೇ ಸಾಲಿನಲ್ಲಿ ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಗೆ ಲೆಕ್ಕಶೀರ್ಷಿಕೆ 2230-01-102-0-01 "ವರ್ಕಿಂಗ್ ಕಂಡೀಷನ್ಸ್ ಅಂಡ್ ಸೇಫ್ಟಿ" ಅಡಿಯಲ್ಲಿ ಒಟ್ಟು ರೂ. 1492.00 ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ.

ಮೇಲೆ ಓದಲಾದ (3)ರಲ್ಲಿ ಆರ್ಥಿಕ ಇಲಾಖೆಯ ಆಯವ್ಯಯ ಸಲಹಾ ಟಿಪ್ಪಣಿಯಲ್ಲಿ ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯ ಲೆಕ್ಕಶೀರ್ಷಿಕೆ 2230-01-102-0-01 ರ ಉಪ ಲೆಕ್ಕಶೀರ್ಷಿಕೆ 059-ಇತರೆ ಖರ್ಚುಗಳು ಅಡಿ ಹೊಸ ಆಯವ್ಯಯ ಘೋಷಣೆಗಾಗಿ ರೂ. 100.00 ಲಕ್ಷಗಳ ಅನುದಾನ ಒದಗಿಸಲಾಗಿದ್ದು, ಹೊಸ ಆಯವ್ಯಯ ಘೋಷಣೆಯು ಅಂತಿಮ ಕ್ಷಣದಲ್ಲಿ ಕೈಬಿಡಲಾದ ಕಾರಣ ರೂ. 100.00 ಲಕ್ಷಗಳನ್ನು ಅಧ್ಯರ್ಪಿಸಿಕೊಳ್ಳಲಾಗುವುದು ಹಾಗೂ ಸದರಿ ಉಪ ಲೆಕ್ಕಶೀರ್ಷಿಕೆಯಡಿ ರೂ.50.00 ಲಕ್ಷಗಳ ಅನುದಾನವನ್ನು ಮಾತ್ರ ಪರಿಗಣಿಸುವಂತೆ ತಿಳಿಸಿರುತ್ತಾರೆ.

ಮೇಲೆ ಓದಲಾದ (4)ರ ಆರ್ಥಿಕ ಇಲಾಖೆಯು ಸರ್ಕಾರಿ ಆದೇಶದಲ್ಲಿ 2019-20ನೇ ಸಾಲಿನ ಆಯವ್ಯಯದಲ್ಲಿ ಬೇಡಿಕೆ ಸಂಖ್ಯೆ:23, ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಯ ಲೆಕ್ಕಶೀರ್ಷಿಕೆ 2230-01-102-0-01, ಕಾರ್ಖಾನೆಗಳ ಪರಿವೀಕ್ಷಕರು, ಉಪ ಶೀರ್ಷಿಕೆ-059 ಇತರೆ ಖರ್ಚುಗಳು, ಅಡಿ ರೂ.100.00 ಲಕ್ಷಗಳನ್ನು ಸರ್ಕಾರಕ್ಕೆ ಅಧ್ಯರ್ಪಿಸಿಕೊಳ್ಳಲು ಒಪ್ಪಿರುತ್ತದೆ ಎಂದು ಆದೇಶಿಸಿದೆ.

ಮೇಲೆ ಓದಲಾದ (5)ರ ಪತ್ರದಲ್ಲಿ 2019-20 ನೇ ಸಾಲಿನ ಆಯವ್ಯಯದಲ್ಲಿ ಮೊದಲನೇ ತ್ರೈಮಾಸಿಕದಲ್ಲಿ ಇಲಾಖೆಯ ಅಧಿಕಾರಿ/ಸಿಬ್ಬಂದಿರವರ ವೇತನ ಹಾಗೂ ಭತ್ಯೆಗಳಿಗಾಗಿ, ಇತರೆ ಪೂರಕ ವೆಚ್ಚಗಳಿಗಾಗಿ ಮತ್ತು ಮುಂದುವರೆದ ಯೋಜನೆಗಳಿಗಾಗಿ ಒಟ್ಟು ರೂ 1392.00 ಲಕ್ಷಗಳ ಅನುದಾನದಲ್ಲಿ ಮೊದಲನೇ ಕಂತಾಗಿ ರೂ 348.00 ಲಕ್ಷಗಳನ್ನು ಬಿಡುಗಡೆ ಮಾಡಲು ನಿರ್ದೇಶಕರು ಈ ಮೂಲಕ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ ಕಾಇ 7 ಕಾಬಾಸೇ 2019, ಬೆಂಗಳೂರು, ದಿನಾಂಕ: 29-04-2019**

2019-20ನೇ ಸಾಲಿಗೆ ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆಗೆ ಲೆಕ್ಕ ಶೀರ್ಷಿಕೆ 2230-01-102-0-01 "ವರ್ಕಿಂಗ್ ಕಂಡೀಷನ್ಸ್ ಅಂಡ್ ಸೇಫ್ಟಿ" ಅಡಿಯಲ್ಲಿ ಒದಗಿಸಲಾಗಿರುವ ರೂ.1492 ಲಕ್ಷಗಳ ಅನುದಾನದಲ್ಲಿ ಉಪ ಲೆಕ್ಕಶೀರ್ಷಿಕೆ 059-ಇತರೆ ಖರ್ಚುಗಳು ಅಡಿಯಲ್ಲಿ ಒದಗಿಸಲಾದ ರೂ.150.00 ಲಕ್ಷಗಳಲ್ಲಿ ರೂ.50.00 ಲಕ್ಷಗಳ ಅನುದಾನವನ್ನು ಮಾತ್ರ ಪರಿಗಣಿಸಿ, ಒಟ್ಟಾರೆ 2019-20ನೇ ಸಾಲಿಗೆ ರೂ. 1392 ಲಕ್ಷಗಳ ಅನುದಾನದಲ್ಲಿ ಮೊದಲನೇ ಕಂತಿನ ಅನುದಾನವಾಗಿ ರೂ. 348.00 ಲಕ್ಷಗಳನ್ನು (ಮುನ್ನೂರ ನಲವತ್ತೆಂಟು ಲಕ್ಷಗಳು ಮಾತ್ರ) ಬಿಡುಗಡೆ ಮಾಡಲಾಗಿದೆ ಮತ್ತು ಸದರಿ ಅನುದಾನವನ್ನು ನಿಯಮಾನುಸಾರ ಮಾತ್ರ ವೆಚ್ಚ ಮಾಡಲು ಸಹಮತಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2019, ದಿನಾಂಕ: 03.04.2019 ರನ್ವಯ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

A. N. Radhamani 29/4/19
(ಎ. ಎನ್. ರಾಧಾಮಣಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ
(ಕಾರ್ಖಾನೆ ಮತ್ತು ಬಾಯ್ಲರುಗಳು)

ಇವರಿಗೆ:

2. ಮಹಾಲೇಖಾಪಾಲರು, ಲೆಕ್ಕಪತ್ರ/ಲೆಕ್ಕ ಪರಿಶೋಧನೆ, ಕರ್ನಾಟಕ, ಬೆಂಗಳೂರು.
3. ನಿರ್ದೇಶಕರು, ಕಾರ್ಖಾನೆಗಳು, ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ, 2ನೇ ಮಹಡಿ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನ ಸೌಧ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಕಾರ್ಮಿಕ ಇಲಾಖೆ.
6. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ ಇವರ ಆಪ್ತ ಶಾಖೆ.
9. ಸರ್ಕಾರದ ಉಪ ಕಾರ್ಯದರ್ಶಿ-2, ಕಾರ್ಮಿಕ ಇಲಾಖೆ ಇವರ ಆಪ್ತ ಶಾಖೆ.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.